ನಿರ್ದೇಶಕರ ಕಛೇರಿ
ಪೌರಾಡಳಿತ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22867172 / 22866302
ಫ್ಯಾಕ್ಸ್: 080-22863576 / 22861665
Email: dmablr@gmail.com
Website: www.municipaladmn.gov.in
9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

ಸಂಖ್ಯೆ: ಪೌನಿ:35ಘವನಿ:2019-20 [30317]

ದಿನಾಂಕ: 27-03-2020

## ಸುತ್ತೋಲೆ

ವಿಷಯ: ರಾಜ್ಯದಲ್ಲಿ ಕೋವಿಡ್-2019 ತುರ್ತು ಪರಿಸ್ಥಿತಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಂದ ಕಟ್ಟುನಿಟ್ಟಾಗಿ ಕೈಗೊಳ್ಳಬೇಕಾದ ತುರ್ತುಕ್ರಮದ ಬಗ್ಗೆ.

ಉಲ್ಲೇಖ
1. ಪೌರಾಡಳಿತ ನಿರ್ದೇಶನಾಲಯದ ಪತ್ರದ ಸಂಖ್ಯೆ: ಪೌನಿ/35/ಘವನಿ/2019-20, (30317) ದಿನಾಂಕ: 13-03-2020
2. ಪೌರಾಡಳಿತ ನಿರ್ದೇಶನಾಲಯದ ಪತ್ರದ ಸಂಖ್ಯೆ:ಪೌನಿ/ಘವನಿ/ಫೆಅ77/2020 ದಿನಾಂಕ: 18-03-2020
3. ಪೌರಾಡಳಿತ ನಿರ್ದೇಶನಾಲಯದ ಪತ್ರದ ಸಂಖ್ಯೆ: ಪೌನಿ/35/ಘವನಿ/2019-20, ದಿನಾಂಕ: 19-03-2020
4. ಪೌರಾಡಳಿತ ನಿರ್ದೇಶನಾಲಯದ ಪತ್ರದ ಸಂಖ್ಯೆ: ಪೌನಿ/58/ಘವನಿ/2018-19, ದಿನಾಂಕ: 24-03-2020

****

ರಾಜ್ಯದ ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕೋವಿಡ್-19 (ಕರೋನಾ ವೈರಸ್) ಸಾಂಕ್ರಮಿಕ ರೋಗ ಹರಡುವುದನ್ನು ತಡೆಗಟ್ಟಲು ಸಾಕಷ್ಟು ಮುಂಜಾಗ್ರತಾ ಕ್ರಮಮವಹಿಸಲು ಈಗಾಗಲೇ ಉಲ್ಲೇಖಿತ ಪತ್ರಗಳ ರೀತ್ಯಾ ಸೂಚನೆಗಳನ್ನು ನೀಡಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ನಗರ/ಪಟ್ಟಣದ ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ಎಲ್ಲಾ ಪೌರಕಾರ್ಮಿಕರು, ವಾಹನ ಚಾಲಕರು, ಲೋಡರ್ ಕ್ಲೀನರ್ಸ್, ಸೂಪರ್‌ವೈಸರ್ ಗಳ ಆರೋಗ್ಯ ರಕ್ಷಣೆಗೆ ಈ ಕೆಳಕಂಡಂತೆ ಕ್ರಮವಹಿಸಲು ಸೂಚಿಸಿದೆ.

- ಪೌರಕಾರ್ಮಿಕರು, ವಾಹನ ಚಾಲಕರು, ಲೋಡರ್ಸ್, ಸ್ಯಾನಿಟರಿ ಸೂಪರ್‌ವೈಸರ್ಸ್ ಹಾಗು ಇತರೆ ಸ್ವಚ್ಛತೆ ಕೆಲಸಗಾರರು ತ್ಯಾಜ್ಯ ಸಂಗ್ರಹಣೆ ಹಾಗು ಇನ್ನಿತರೆ ಸ್ವಚ್ಛತಾ ಕೆಲಸಗಳನ್ನು ಬೆಳಿಗ್ಗೆ 6:30 ರಿಂದ 10:30 ರವರೆಗೆ ಕೆಲಸ ನಿರ್ವಹಿಸುವಂತೆ ಕ್ರಮವಹಿಸುವುದು.
- ನಗರಸ್ಥಳೀಯ ಸಂಸ್ಥೆಗಳಲ್ಲಿ ರಚಿಸಿರುವ ವಿಶೇಷ ಕಾರ್ಯಪಡೆಯು ಈ ಎಲ್ಲಾ ಸಿಬ್ಬಂಧಿಗಳಿಗೆ ವೈಯಕ್ತಿಕ ಶುಚಿತ್ವ ಕಾಪಾಡಿಕೊಳ್ಳುವಂತೆ ತಿಳುವಳಿಕೆ ನೀಡುವುದು ಹಾಗು ಮಾಸ್ಕ್, ಹ್ಯಾಂಡ್ ಗ್ಲೋವ್ಸ್, ಸಮವಸ್ತ್ರ ಹಾಗು ಇತರೆ ಸುರಕ್ಷತಾ ಧಿರಿಸುಗಳನ್ನು ಸಾಕಷ್ಟು ಪ್ರಮಾಣದಲ್ಲಿ ಪುರಸಭಾ ನಿಧಿ/ ಎಸ್.ಎಫ್.ಸಿ ಮುಕ್ತ ನಿಧಿಯಡಿ ಕಾಯ್ದಿರಿಸಿರುವ ಶೇ 24.10 ರ ಅನುದಾನದಡಿ ಖರೀದಿಸುವುದು.
- ಎಲ್ಲಾ ಸಿಬ್ಬಂಧಿಗಳು ಸುರಕ್ಷಾ ಪರಿಕರಗಳನ್ನು ಕಡ್ಡಾಯವಾಗಿ ಉಪಯೋಗಿಸುತ್ತಿರುವ ಬಗ್ಗೆ ಪರಿಶೀಲಿಸಿ ಖಾತರಿಪಡಿಸಿಕೊಳ್ಳುವುದು ಹಾಗು ಒಮ್ಮೆ ಬಳಸಿದ ಮಾಸ್ಕ್‌ಗಳನ್ನು ಮತ್ತೊಮ್ಮೆ ಉಪಯೋಗಿಸದಂತೆ ಎಚ್ಚರ ವಹಿಸುವುದು.

Scanned with CamScanner

- ಮಾಸ್ಕ್ ಲಭ್ಯತೆ ಅಭಾವವಾದಲ್ಲಿ ಮುಂಜಾಗ್ರತಾ ಕ್ರಮವಾಗಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ SHG ಗುಂಪುಗಳಿಂದ ಮಾಸ್ಕ್ ತಯಾರಿಕೆಗೆ ಪ್ರೋತ್ಸಾಹ ನೀಡುವುದು.
- ಜಿಲ್ಲಾ ಆರೋಗ್ಯ ಇಲಾಖೆಯೊಂದಿಗೆ ಸಮನ್ವಯತೆ ಸಾಧಿಸಿ Thermal sensors ಮೂಲಕ ಎಲ್ಲಾ ಸಿಬ್ಬಂದಿಗಳನ್ನು ತಪಾಸಣೆಗೆ ಒಳಪಡಿಸಲು ಕ್ರಮವಹಿಸುವುದು.
- ವಾರಕ್ಕೊಮ್ಮೆ ಪೌರಕಾರ್ಮಿಕರು ಸೇರಿದಂತೆ ಎಲ್ಲಾ ಸ್ವಚ್ಛತಾ ಕೆಲಸಗಾರರಿಗೆ ಆರೋಗ್ಯ ತಪಾಸಣೆಯನ್ನು ಕಡ್ಡಾಯವಾಗಿ ಮಾಡಿಸುವುದು. ಜ್ವರ, ಕೆಮ್ಮು, ನೆಗಡಿ ಹಾಗು ಇತರೆ ರೋಗ ಲಕ್ಷಣಗಳು ಕಂಡುಬಂದ ಕೂಡಲೆ ಮುಂದಿನ ಅಗತ್ಯ ಚಿಕಿತ್ಸೆಗಾಗಿ ಜಿಲ್ಲಾ ಅಥವಾ ತಾಲ್ಲೂಕು ಆಸ್ಪತ್ರೆಗಳಿಗೆ ಕಳುಹಿಸುವುದು.
- ಕರ್ತವ್ಯ ನಿರತ ಪೌರಕಾರ್ಮಿಕರು ಅಥವಾ ಇತರೆ ಸ್ವಚ್ಛತಾ ಕೆಲಸಗಾರರಿಗೆ ಅನಾರೋಗ್ಯ ಉಂಟಾದಲ್ಲಿ, ಈ ಬಗ್ಗೆ ಪರಿಶೀಲಿಸಿ ಅಗತ್ಯವೆನಿಸಿದಲ್ಲಿ ವೇತನ ಸಹಿತ ರಜೆ ನೀಡಲು ಜಿಲ್ಲಾಧಿಕಾರಗಳ ಹಂತದಲ್ಲಿ ನಿರ್ಧಾರ ಕೈಗೊಳ್ಳುವುದು.
- ಪೌರಕಾರ್ಮಿಕರು ವೈಯಕ್ತಿಕ ತೊಂದರೆ ಅಥವಾ ಸಂಕಷ್ಟಗಳಿಂದಾಗಿ ಕರ್ತವ್ಯಕ್ಕೆ ಹಾಜರಾಗದೆ ಇದ್ದಲ್ಲಿ ಅಂತಹವರನ್ನು ಈ ಅವಧಿಯಲ್ಲಿ ಕೆಲಸದಿಂದ ವಜಾಮಾಡತಕ್ಕದ್ದಲ್ಲ.
- ಅವಶ್ಯವಿರುವ ಸ್ವಚ್ಛತಾ ಸಿಬ್ಬಂಧಿಗಳಿಗೆ ಸೂಕ್ತ ಸಾರಿಗೆ ವ್ಯವಸ್ಥೆ ಕಲ್ಪಿಸುವುದು.
- ಸ್ವಚ್ಛತಾ ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ಎಲ್ಲಾ ಸಿಬ್ಬಂಧಿಗಳು ತಮ್ಮ ನಡುವೆ ಕನಿಷ್ಠ ಒಂದು ಮೀಟರ್ ಸಾಮಾಜಿಕ ಅಂತರ ಕಾಯ್ದುಕೊಳ್ಳುವಂತೆ ತಿಳುವಳಿಕೆ ನೀಡುವುದು.
- ಪೌರಕಾರ್ಮಿಕರು, ವಾಹನ ಚಾಲಕರು, ಲೋಡರ್ಸ್, ಕ್ಲೀನರ್ಸ್, ಸೂಪರ್‌ವೈಸರ್ ಹಾಗು ಇತರೆ ಸ್ವಚ್ಛತಾ ಸಿಬ್ಬಂಧಿಗಳು ವಾಸಿಸುವ ಕಾಲೋನಿಗಳಲ್ಲಿ Sodium Hypochlorite solution ಸಿಂಪಡಿಸಿ ಸ್ವಚ್ಛತೆ ಕಾಪಾಡುವಂತೆ ಕ್ರಮವಹಿಸುವುದು.

ನಗರಸ್ಥಳೀಯ ಸಂಸ್ಥೆಗಳಲ್ಲಿ ಪರಿಸರ ಅಭಿಯಂತರರು, ಹಿರಿಯ ಆರೋಗ್ಯ ನಿರೀಕ್ಷಕರು ಸಮುದಾಯ ಸಂಘಟಕರುಗಳನ್ನು ಸಂಪನ್ಮೂಲ ವ್ಯಕ್ತಿಗಳನ್ನಾಗಿ ನೇಮಿಸಿದ್ದು, ಆರೋಗ್ಯ ಇಲಾಖೆಯ ಮಾರ್ಗಸೂಚಿಗಳ ಅನ್ವಯ ಕರೋನಾ ವೈರಸ್ ಸೋಂಕು ಹರಡುವುದನ್ನು ತಡೆಗಟ್ಟುವ ಮಾರ್ಗಗಳು, ಸಾಮಾಜಿಕ ಅಂತರ ಕಾಯ್ದುಕೊಳ್ಳುವಿಕೆ, ಸ್ವಯಂ ಜಾಗರೂಕತೆ, self quarantine, ಲಭ್ಯವಿರುವ ವೈದ್ಯಕೀಯ ಆರೈಕೆ, quarantine ಆಗಿರುವ ಮನೆಗಳಿಂದ ತ್ಯಾಜ್ಯ ಸಂಗ್ರಹಣೆಗೆ ವಿಶೇಷ ಸುರಕ್ಷತಾ ಕ್ರಮಗಳು, ಇತ್ಯಾದಿಗಳ ಕುರಿತು ಆರೋಗ್ಯ ಇಲಾಖೆಯು ನಿಯತಕಾಲಿಕವಾಗಿ ನೀಡುತ್ತಿರುವ ಆರೋಗ್ಯ ಸಲಹೆಗಳನ್ನು ಪಾಲಿಸುವ ಕುರಿತು ಎಲ್ಲಾ ಸ್ವಚ್ಛತಾ ಸಿಬ್ಬಂಧಿಗಳಿಗೆ ಕಡ್ಡಾಯವಾಗಿ ಅರಿವು ಮೂಡಿಸುವುದು.

20.20.3/20

ನಿರ್ದೇಶಕರು,
ಪೌರಾಡಳಿತ ನಿರ್ದೇಶನಾಲಯ
ಬೆಂಗಳೂರು

ಗೆ,

1) ರಾಜ್ಯದ ಎಲ್ಲಾ ಯೋಜನಾ ನಿರ್ದೇಶಕರುಗಳಿಗೆ, ಜಿಲ್ಲಾ ನಗರಾಭಿವೃದ್ಧಿ ಕೋಶ
2) ಆಯುಕ್ತರು/ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳಿಗೆ, ರಾಜ್ಯದ ಎಲ್ಲಾ ಮಹಾನಗರಪಾಲಿಕೆ / ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿ ಮತ್ತು ಅಧಿಸೂಚಿತ ಪ್ರದೇಶ ಸಮಿತಿ

Scanned with CamScanner